ಅಧ್ಯಕ್ಷರು : ಮಾನ್ಯ ಮುಖ್ಯಮಂತ್ರಿಯವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬೇಕು.

ಪ್ರಸ್ತಾವದ ಅಂಗೀಕಾರ

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಕರ್ನಾಟಕ ವಿದ್ಯುಚ್ಛಕ್ತಿ(ಬಳಕೆಯ ಮೇಲೆ ತೆರಿಗೆ ನಿರ್ಧರಣೆ) (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. 2013ನೇ ಸಾಲಿನ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆಯ ಮೇಲೆ ತೆರಿಗೆ ನಿರ್ಧರಣೆ) (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು **ಹೌದು** ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು **ಇಲ್ಲ** ಎಂದು ಸೂಚಿಸಬೇಕು.
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು)

6. ವಿತ್ತೀಯ ಕಾರ್ಯಕಲಾಪ

2012–13ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಹಾಗೂ ಅಂತಿಮ ಕಂತು) ಮೇಲೆ ಚರ್ಚೆ, ಹಾಗೂ ಮತಕ್ಕೆ ಹಾಕುವುದು.

ಅಧ್ಯಕ್ಷರು : 2012–13ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಹಾಗೂ ಅಂತಿಮ ಕಂತು) ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

ಶ್ರೀ ಜಗದೀಶ್ ಶೆಟ್ಟರ್(ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2012–13ನೇ ಸಾಲಿಗೆ 1,17,000 ಕೋಟಿ ರೂ.ಗಳ ಆಯವ್ಯಯಕ್ಕೆ ಸದನವು ಅನುಮೋದನೆ ನೀಡಿದೆ. ಪೂರಕ ಒಂದು ಮತ್ತು ಎರಡನೇ ಕಂತಿನಲ್ಲಿ ಒಟ್ಟು

10,231 ಕೋಟಿ ರೂ.ಗಳಿಗೆ ಈಗಾಗಲೇ ಸದನವು ಅನುಮತಿಯನ್ನು ಕೊಟ್ಟಿದೆ. ಈಗ ಪೂರಕ ಅಂದಾಜುಗಳ (ಮೂರನೇ ಹಾಗೂ ಅಂತಿಮ ಕಂತು)ಗಳಲ್ಲಿ ಸಾಮಾನ್ಯ ರಾಜಸ್ವದಿಂದ ಹೊರ ಹೋಗುವ 1,594 ಕೋಟಿ ರೂ.ಗಳು ಸೇರುವಂತೆ ಒಟ್ಟು 5,822 ಕೋಟಿ ರೂ.ಗಳನ್ನು ವಿಧಾನ ಮಂಡಲದ ಮುಂದೆ ಮಂಡಿಸಲಾಗುತ್ತಿದೆ. ಇದು 3,613 ಕೋಟಿ ರೂ.ಗಳನ್ನು ಕೂಡ ವಸೂಲಿಯನ್ನು ಒಳಗೊಂಡಿರುತ್ತದೆ. ಇದರಲ್ಲಿ ಪ್ರಮುಖವಾಗಿ ಲೋಕೋಪಯೋಗಿ ಇಲಾಖೆಗೆ ಸಂಬಂಧಪಟ್ಟಂತೆ ರಸ್ತೆ, ಸೇತುವೆ, ಮತ್ತು 803 ಕೋಟಿ ರೂ.ಗಳು ಗ್ರಾಮೀಣ ವಿದ್ಯುದೀಕರಣ ಸಲುವಾಗಿ, ನೀರಾವರಿ ಪಂಪ್ ಸೆಟ್‌ಗಳ ಸಹಾಯಧನ 750 ಕೋಟಿ ರೂ.ಗಳು, ಬಂಡವಾಳ ಹೂಡಿಕೆ ಸಲುವಾಗಿ 750 ಕೋಟಿ ರೂ.ಗಳು, ಬಿಬಿಎಂಪಿ ಅಭಿವೃದ್ಧಿ ಕಾಮಗಾರಿಗಳಿಗೆ ವಿಶೇಷ ಅನುದಾನ 250 ಕೋಟಿ ರೂ.ಗಳು, ಅಕ್ಷರ ದಾಸೋಹಕ್ಕೆ 195 ಕೋಟಿ ರೂ.ಗಳು, ಗ್ರಾಮೀಣ ನೀರು ಸರಬರಾಜಿಗೆ 100 ಕೋಟಿ ರೂ.ಗಳು, food ಸಬ್ಸಿಡಿ 100 ಕೋಟಿ ರೂ.ಗಳು, ಭಾಗ್ಯಲಕ್ಷ್ಮಿ ಯೋಜನೆಗೆ 87 ಕೋಟಿ ರೂ.ಗಳು, ಪೊಲೀಸ್ ಪಡೆಗಳ ಆಧುನೀಕರಣ ಹಾಗೂ ಧಾರ್ಮಿಕ ಸಂಸ್ಥೆಗಳಿಗೆ 75 ಕೋಟಿ ರೂ.ಗಳು, ಈ ರೀತಿ ಇವತ್ತು ಪ್ರಮುಖವಾಗಿರುವಂಥದ್ದಕ್ಕೆ ಪೂರಕ ಅಂದಾಜಿನಲ್ಲಿ ನಾನು ಅನುದಾನವನ್ನು ಕೇಳುತ್ತಿದ್ದೇನೆ. ಆ ದೃಷ್ಟಿಯಿಂದ ಇದಕ್ಕೆ ಅನುಮತಿಯನ್ನು ಕೊಡಬೇಕೆಂದು ಈ ಸಂದರ್ಭದಲ್ಲಿ ತಮ್ಮಲ್ಲಿ ವಿನಂತಿ ಮಾಡುತ್ತೇನೆ.

ಅಧ್ಯಕ್ಷರು : 2012–13ನೇ ಸಾಲಿನ (ಮೂರನೇ ಹಾಗೂ ಅಂತಿಮ ಕಂತು) ನ ಪೂರಕ ಅಂದಾಜುಗಳ ಬೇಡಿಕೆಗಳಿಗೆ ಸಂಬಂಧಿಸಿದ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವವು ಹೀಗಿದೆ" ದಿನಾಂಕ: 31.03.2013 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 28ಕ್ಕೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲನ್ನು ಸೇರಿ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಿಗೆ ಮೀರದ ಮೊತ್ತವನ್ನು ಈ ಸಭೆಯೂ ಮಂಜೂರು ಮಾಡುತ್ತದೆ.

ಪ್ರಸ್ತಾವದ ಪರವಾಗಿರುವವರು **ಹೌದು** ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು ಇಲ್ಲ ಎಂದು ಸೂಚಿಸಬೇಕು
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು **ಹೌದು** ಹೌದು ಎನ್ನುವವರ ಪರವಾಗಿದೆ

ಪ್ರಸ್ತಾವವು **ಹೌದು** ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಬೇಡಿಕೆಗಳನ್ನು ಮಂಜೂರು ಮಾಡಲಾಯಿತು

(ಮಾನ್ಯ ಅಧ್ಯಕ್ಷರು ಆದೇಶದ ಮೇರೆಗೆ ಮಂಜೂರಾದ ಮೊತ್ತವನ್ನು ಈ ಕೆಳಗೆ ನಮೂದಿಸಲಾಗಿದೆ)

1. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಕೃಷಿ ಮತ್ತು ತೋಟಗಾರಿಕೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 2490.19 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

2. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಪಶುಸಂಗೋಪನೆ ಮತ್ತು ಮೀನುಗಾರಿಕೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 3132.41 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

3. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಆರ್ಥಿಕ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1759.68 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 6005.98 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

4. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 3275.59 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

5. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಒಳಾಡಳಿತ ಮತ್ತು ಸಾರಿಗೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ

ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 19702.93 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 48.55 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

6. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಮೂಲಭೂತ ಸೌಕರ್ಯ ಅಭಿವೃದ್ಧಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

7. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತಿ ರಾಜ್" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 26051.06 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 20683.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

8. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಅರಣ್ಯ, ಜೀವಿ ಶಾಸ್ತ್ರ ಮತ್ತು ಪರಿಸರ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 6558.97 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

9. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಸಹಕಾರ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 3.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

10. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಸಮಾಜ ಕಲ್ಯಾಣ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 12107.60 ಲಕ್ಷ ರೂ.ಗಳಿಗೆ ಮೀರದ

ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

11. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 9599.73 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

12. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 457.42 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 100.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

13. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಆಹಾರ ಮತ್ತು ನಾಗರೀಕ ಸರಬರಾಜು" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 10019.16 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

14. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಕಂದಾಯ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 112812.66 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

15. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಮಾಹಿತಿ ತಂತ್ರಜ್ಞಾನ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 187.50 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

16. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ"ವಸತಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1422.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

17. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ"ಶಿಕ್ಷಣ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 27033.72 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 1180.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

18. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ "ವಾಣಿಜ್ಯ ಮತ್ತು ಕೈಗಾರಿಕೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 5953.47 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 5622.62 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

19. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ"ನಗರಾಭಿವೃದ್ಧಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 39701.81 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

20. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ" ಲೋಕೋ-ಪಯೋಗಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 30755.48 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 56427.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

21. 2013ನೇ ಮಾರ್ಚ್31ರ ಅಂತ್ಯದೊಳಗಾಗಿ "ಜಲ ಸಂಪನ್ಮೂಲ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ

ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 11968.30 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 6029.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

22. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ"ಆರೋಗ್ಯ ಮತ್ತು ಕುಟುಂಬ ಕಲ್ಯಾಣ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 3560.96 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 5700.01 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

23. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ"ಕಾರ್ಮಿಕ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 69.31 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

24. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ"ಇಂಧನ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 75000.00 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 50000.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

25. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ"ಕನ್ನಡ ಮತ್ತು ಸಂಸ್ಕೃತಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 980.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

26. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ"ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 18.68

ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

27. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ"ಕಾನೂನು" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 497.38 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

28. 2013ನೇ ಮಾರ್ಚ್ 31ರ ಅಂತ್ಯದೊಳಗಾಗಿ"ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 225.58 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

ಬೆಂಗಳೂರು
ದಿನಾಂಕ: ಫೆಬ್ರವರಿ, 2013

ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

7. ಶಾಸನ ರಚನೆ

(ಅ) ವಿಧೇಯಕವನ್ನು ಮಂಡಿಸುವುದು

1. ಕರ್ನಾಟಕ ಧನವಿನಿಯೋಗ ವಿಧೇಯಕ, 2013

ಅಧ್ಯಕ್ಷರು : ಮಾನ್ಯ ಮುಖ್ಯಮಂತ್ರಿಯವರು, ಕರ್ನಾಟಕ ಧನವಿನಿಯೋಗ ವಿಧೇಯಕ 2013 ಅನ್ನು ಮಂಡಿಸಬೇಕು.

ವಿಧೇಯಕದ ಮಂಡನೆ

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು): ಕರ್ನಾಟಕ ಧನವಿನಿಯೋಗ ವಿಧೇಯಕ, 2013 ಅನ್ನು ಮಂಡಿಸಲು ಅನುಮತಿಯನ್ನು ಕೋರುತ್ತೇನೆ.